ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು ? (ಮಾಹಿತಿ ನೀಡುವುದು)

ಶ್ರೀ ಕಳಕಪ್ಪ ಜಿ. ಬಂಡಿ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :-

ಅ) ಹೌದು.

ಆ) ಗೌರಿಬಿದನೂರು ತಾಲ್ಲೂಕಿನಲ್ಲಿ 349 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, 190 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. 23 ಕಟ್ಟಡಗಳಿಗೆ ಕಾಮಗಾರಿ ಮಂಜೂರಾಗಿದ್ದು, ನಿರ್ಮಾಣ ಹಂತದಲ್ಲಿರುತ್ತದೆ.

2011-12ನೇ ಸಾಲಿನಲ್ಲಿ ಆರ್.ಐ.ಡಿ.ಎಫ್. ಯೋಜನೆಯಡಿ ಒಂದು ಕಟ್ಟಡ ವಿಶೇಷ ಅಭಿವೃದ್ಧಿ ಯೋಜನೆಯಡಿ 5 ಕಟ್ಟಡಗಳನ್ನು ಮಂಜೂರು ಮಾಡಲಾಗಿರುತ್ತದೆ. ಉಳಿದ 130 ಅಂಗನವಾಡಿಗಳಿಗೆ ಸ್ವಂತ ಕಟ್ಟಡ ನಿರ್ಮಿಸಬೇಕಾಗಿದ್ದು, ಅನುದಾನ ಹಾಗೂ ನಿವೇಶನದ ಲಭ್ಯತೆ ಮೇರೆಗೆ ಹಂತಹಂತವಾಗಿ ಕಟ್ಟಡಗಳನ್ನು ನಿರ್ಮಿಸಲಾಗುವುದು.

ಸಂಗೀತ ವಿಶ್ವವಿದ್ಯಾಲಯ ಸ್ಥಾಪನೆ

252 (414) ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು). :- ಮಾನ್ಯ ಉನ್ನತ ಶಿಕ್ಷಣ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಕರ್ನಾಟಕ ಸಂಗೀತ ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಕಳೆದ ಸಾಲಿನಲ್ಲಿ ನಿರ್ಣಯ ಕೈಗೊಂಡಿರುವ ವಿಚಾರ ಸರ್ಕಾರದ ಮುಂದಿದೆಯೇ ; ಬಂದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಎಲ್ಲಿ ಪ್ರಾರಂಭಿಸಲಾಗುವುದು ;

ಆ) ಸ್ಥಾಪನೆಯ ಪ್ರಕ್ರಿಯೆಯು ಯಾವ ಹಂತದಲ್ಲಿದೆ ? (ವಿವರ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು) :-

ಅ) ಬಂದಿದೆ. ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯವು ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಅಧಿನಿಯಮ 2009ರನ್ವಯ

ಸ್ಥಾಪಿಸಲಾಗಿದ್ದು, ಜಿಲ್ಲಾಡಳಿತವು ಒದಗಿಸಿರುವ ಮೈಸೂರು ನಗರದ ಲಕ್ಷ್ಮೀಪುರಂನ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿದೆ. ಸದರೀ ವಿಶ್ವವಿದ್ಯಾಲಯವನ್ನು ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನ ಬಿಳಿಕೆರೆ ಹೋಬಳಿಯ ಧರ್ಮಾಪುರ ಗ್ರಾಮದಲ್ಲಿ ಪ್ರಾರಂಭಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಆ) ಈಗಾಗಲೇ ಸ್ಥಾಪನೆಯಾಗಿದ್ದು 2009ನೇ ಇಸವಿಯಿಂದ ಕಾರ್ಯನಿರ್ವಹಿಸುತ್ತಿದೆ.

ರಾಯಭಾಗ ತಾಲ್ಲೂಕಿನ ಪಶು ಚಿಕಿತ್ಸಾಲಯ ಮೇಲ್ದರ್ಜೆಗೇರಿಸುವುದು

188 (870) ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ). :– ಮಾನ್ಯ ಪಶುಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಯಭಾಗ ತಾಲ್ಲೂಕಿನಲ್ಲಿ ಹಾಲಿ ಇರುವ ಜಾನುವಾರುಗಳು, ಕುರಿ ಮೇಕೆಗಳು, ಕೋಳಿ ಮತ್ತು ಇತರೆ ಪ್ರಾಣಿಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

ಆ) ಸದರಿ ತಾಲ್ಲೂಕಿನಲ್ಲಿ ಇರುವ ಪಶು ಚಿಕಿತ್ಸಾಲಯಗಳ ಹಾಗೂ ಕೃತಕ ಗರ್ಭಧಾರಣೆ ಕೇಂದ್ರಗಳ ಸಂಖ್ಯೆ ಎಷ್ಟು ? ಅವುಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

ಇ) ತಾಲ್ಲೂಕಿನ ನಿಡಗುಂದಿ, ನಂದಿಕುರಳಿ, ಬಿಂಡಿ, ಸವಸುದ್ದಿ, ಹಿಡಿಕಲ ಹಾಗೂ ಚಿಕ್ಕೋಡಿ ತಾಲ್ಲೂಕಿನ ನಾಗರಮುನ್ನೋಳ ಗ್ರಾಮಗಳಲ್ಲಿ ಪಶು ಚಿಕಿತ್ಸಾಲಯ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಈ) ರಾಯಭಾಗ ತಾಲ್ಲೂಕಿನಲ್ಲಿ ಪಶುವೈದ್ಯಕೀಯ ಪಾಲಿಕ್ಲಿನಿಕ್ ಸ್ಥಾಪಿಸಿ ಅವಶ್ಯವಾದ ಸಿಬ್ಬಂದಿ ನೇಮಿಸಲು ಪ್ರಸ್ತಾವನೆ ಬಂದಿದೆಯೇ ? (ವಿವರ ಒದಗಿಸುವುದು)

ಉ) ಮೇಶಳಿ, ಚಿಂಚಳಿ, ಕಂಕಣವಾಡಿ, ಅಳಗವಾಡಿ ಪ್ರಾಥಮಿಕ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

ಶ್ರೀ ರೇವೂನಾಯಕ್ ಬೆಳಮಗಿ (ಮಾನ್ಯ ಪಶುಸಂಗೋಪನೆ ಸಚಿವರು) :–

ಅ) 2007ರ ಜಾನುವಾರು ಗಣತಿಯಂತೆ ರಾಯಭಾಗ ತಾಲ್ಲೂಕಿನಲ್ಲಿರುವ ಜಾನುವಾರುಗಳು ಮತ್ತು ಇತರೆ ಪ್ರಾಣಿಗಳ ಸಂಖ್ಯಾ ವಿವರ ಈ ಕೆಳಕಂಡಂತಿವೆ :